# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1055 |
| ಉತ್ತರಿಸಬೇಕಾದ ದಿನಾಂಕ | : | 23.02.2024 |
| ಸದಸ್ಯರ ಹೆಸರು | : | ಶ್ರೀ ಶಾಂತರಾಮ್ ಬುಡ್ನ ಸಿದ್ಧಿ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ಸಚಿವರು | : | ಮಾನ್ಯ ಪರಿಶಿಷ್ಟ ಪಂಗಡಗಳ ಕಲ್ಯಾಣ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರ ತಾಲ್ಲೂಕಿನಲ್ಲಿ ಬುಡಕಟ್ಟು ಜನಾಂಗದ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದ್ದು, ಕ್ರೀಡೆಯಲ್ಲಿ ಆಸಕ್ತಿ ಹಾಗೂ ಪ್ರತಿಭೆ ಇದ್ದರೂ ಅವರಿಗೆ ಸರಿಯಾದ ತರಬೇತಿ ಸಿಗದೇ ಕ್ರೀಡಾ ಸಾಧನೆಯಿಂದ ವಂಚಿತರಾಗಿರುವುದರಿಂದ ಈ ತಾಲ್ಲೂಕಿನಲ್ಲಿ ಒಂದು ಕ್ರೀಡಾ ಶಾಲೆಯನ್ನು ಪ್ರಾರಂಭಿಸುವ ಕುರಿತು ಸರ್ಕಾರಕ್ಕೆ ಯೋಚನೆ ಇದೆಯೇ; | ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಉತ್ತರ ಕನ್ನಡ ಜಿಲ್ಲೆ ಕಾರವಾರ ತಾಲ್ಲೂಕಿನಲ್ಲಿ ಅಥ್ಲೆಟಿಕ್ಸ್ ಕ್ರೀಡಾ ವಿಭಾಗದ ಮತ್ತು ಹಳಿಯಾಳ ತಾಲ್ಲೂಕಿನಲ್ಲಿ ಕುಸ್ತಿ ಕ್ರೀಡಾ ವಿಭಾಗದ ಕ್ರೀಡಾ ವಸತಿ ನಿಲಯಗಳನ್ನು ಈಗಾಗಲೇ ಪ್ರಾರಂಭಿಸಲಾಗಿದೆ.<br><br>2023-24ನೇ ಸಾಲಿನಲ್ಲಿ ಕಾರವಾರ ಕ್ರೀಡಾ ವಸತಿ ನಿಲಯದಲ್ಲಿ 27 ಕ್ರೀಡಾಪಟುಗಳು ಹಾಗೂ ಹಳಿಯಾಳ ಕ್ರೀಡಾ ವಸತಿ ನಿಲಯದಲ್ಲಿ 75 ಕ್ರೀಡಾಪಟುಗಳು ಪ್ರವೇಶ ಪಡೆದಿರುತ್ತಾರೆ. ಪ್ರವೇಶ ಪಡೆದ ಕ್ರೀಡಾಪಟುಗಳಿಗೆ ಉಚಿತ ವಸತಿ, ಆಹಾರ ಹಾಗೂ ತರಬೇತಿ ನೀಡಲಾಗುತ್ತಿದೆ.<br><br>ವಿದ್ಯಾನಗರ ಕ್ರೀಡಾ ವಸತಿ ನಿಲಯ, ಬೆಂಗಳೂರು ಇಲ್ಲಿ ಸಿದ್ಧಿ ಜನಾಂಗಕ್ಕೆ ಸೇರಿದ ಪ್ರತಿಭಾವಂತ ಕ್ರೀಡಾ ಪ್ರತಿಭೆಗಳಿಗಾಗಿ ಪ್ರವೇಶಾವಕಾಶ ಕಲ್ಪಿಸಿದ್ದು, ಅಥ್ಲೆಟಿಕ್ಸ್ ಮತ್ತು ಬಾಕ್ಸಿಂಗ್ ಕ್ರೀಡೆಗಳಲ್ಲಿ ಪ್ರಸ್ತುತ 31 ಕ್ರೀಡಾಪಟುಗಳು ತರಬೇತಿ ಪಡೆಯುತ್ತಿರುತ್ತಾರೆ.<br><br>ಈ ಹಿನ್ನೆಲೆಯಲ್ಲಿ ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರ ತಾಲ್ಲೂಕಿನಲ್ಲಿ ಕ್ರೀಡಾಶಾಲೆಯನ್ನು ಪ್ರಾರಂಭಿಸುವ ಪ್ರಸ್ತಾವನೆ ಮುಂದಿರುವುದಿಲ್ಲ. |
| ಆ) | ಕ್ರೀಡಾ ಶಾಲೆಯ ಸ್ಥಾಪನೆ ಕುರಿತು ಸರ್ಕಾರ ಕೈಗೊಂಡ ಕ್ರಮಗಳ ವಿವರ ನೀಡುವುದು? | ಮೇಲಿನ ಉತ್ತರದ ಹಿನ್ನೆಲೆಯಲ್ಲಿ ಅನ್ವಯಿಸುವುದಿಲ್ಲ. |

ಸಂಖ್ಯೆ: ವೈಎಸ್‌ಡಿ-ಇಬಿಬಿ/31/2024

( ಬಿ. ನಾಗೇಂದ್ರ )
ಪರಿಶಿಷ್ಟ ಪಂಗಡಗಳ ಕಲ್ಯಾಣ,
ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.